c) In view of replies given to question B, this question does not arise.

ವಿಷಯ: ಜಿಲ್ಲಾ ಪಂಚಾಯತ್‌ಗಳ ವಿಂಗಡಣೆ

2486 (3900)

ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲೆಗಳ ವಿಂಗಡಣೆಯಾಗುವಾಗ ಜಿಲ್ಲಾ ಪಂಚಾಯತ್‌ಗಳ ವಿಂಗಡಣೆ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ, ಜಿಲ್ಲಾ ಪಂಚಾಯತ್ ಸದಸ್ಯರನ್ನು ಯಾವ ನೆಲೆಯಲ್ಲಿ ಜೇರ್ಪಡಿಸಲಾಗುವುದು? ಇದಕ್ಕೇನಾದರೂ ತೊಂದರೆಯಿದೆಯೇ?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು):

ಅ) ಹೌದು

ಆ) ಹೊಸ ಜಿಲ್ಲೆಯಲ್ಲಿ ಸೇರ್ಪಡೆಯಾದ ಪ್ರದೇಶದ ಪೂರ್ಣ ಅಥವಾ ಬಹು ಭಾಗವು ಇರುವ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳನ್ನು ಪ್ರತಿನಿಧಿಸುವ ಜಿಲ್ಲಾ ಪಂಚಾಯಿತಿಯ ಸದಸ್ಯನು ಅಂತಹ ಜಿಲ್ಲಾ ಪಂಚಾಯಿತಿ ಸದಸ್ಯನಾಗಿ ತನ್ನ ಅವಧಿ ಮುಗಿಯುವವರೆಗೆ ಮುಂದುವರೆಯುತ್ತಾನೆ. ಈ ಕ್ರಮ ಕೈಗೊಳ್ಳಲು ಯಾವುದೇ ತೊಂದರೆ ಇರುವುದಿಲ್ಲ.

ವಿಷಯ: ಪಾಂಡವಪುರ ಕ್ಷೇತ್ರದಲ್ಲಿ ಹಂದಿಗಳ ಹಾವಳಿ

2487 (3194)

ಶ್ರೀ ಕೆ.ಎಸ್.ಪುಟ್ಟಣ್ಣಯ್ಯ (ಪಾಂಡವಪುರ): ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಹಂದಿ ಮತ್ತು ಆನೆಗಳಿಂದ ಕೃಷಿ ಕ್ಷೇತ್ರದ ಬೆಳೆಗಳ ನಾಶದ ಬಗ್ಗೆ ಕಳೆದ ಶಾಸನ ಸಭೆಯಲ್ಲಿ ಚರ್ಚೆಯಾಗಿದ್ದು ಸರ್ಕಾರವು ಇದುವರೆವಿಗೂ ಕೈಗೊಂಡ ಕ್ರಮಗಳೇನು?

2) ಪಾಂಡವಪುರ ಕ್ಷೇತ್ರದಲ್ಲಿ ಪುನಃ ಹಂದಿಗಳ ಕಾಟ ಜಾಸ್ತಿಯಾಗಿದ್ದು ಈ ಹಂದಿಗಳ ಹಾವಳಿಯನ್ನು ಕಡಿಮೆ ಮಾಡಲು ಸಾಧ್ಯವಿಲ್ಲದಿದ್ದರೆ ಇವುಗಳಿಂದ ಉಂಟಾದ ರೈತರ ಬೆಳೆಗಳ ನಷ್ಟಕ್ಕೆ ಪರಿಹಾರ ಕೊಡುವ ಆಲೋಚನೆ ಸರ್ಕಾರದ ಮುಂದಿದೆಯೇ?

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಅರಣ್ಯ ಸಚಿವರು):

1) [illegible] ತರ ಬೆಳೆ ನಾಶವಾಗಿದ್ದಲ್ಲಿ, ಅವರುಗಳಿಗೆ ಸೂಕ್ತ ಪರಿಹಾರವನ್ನು ನೀಡಲಾಗು[illegible] ತರ ಜಮೀನಿಗೆ ಬಾರದಂತೆ ತಡೆ ಗಟ್ಟಲು ಆನೆ ನೀರೊಧಕ ಕಂದಕಗಳನ್ನು [illegible] ಮಂದು ಮತ್ತು ಆನೆಗಳು ಕೃಷಿಕ್ಷೇತ್ರಕ್ಕೆ ಪ್ರವೇಶಿಸಿದಾಗ ಅವುಗಳನ್ನು ಕಾಡಿಗೆ [illegible] ಕ್ರಮ ಕೈಗೊಳ್ಳಲಾಗುತ್ತಿದೆ.

2) ಇಲ್ಲ.

ವಿಷಯ: ಅಸಂಘಟಿತ ಕಾರ್ಮಿಕರಿಗೆ ಹೆಲ್ತ್ ಕಾರ್ಡ್.

2488 (3195)

ಶ್ರೀ ಕೆ.ಎಸ್.ಪುಟ್ಟಣ್ಣಯ್ಯ (ಪಾಂಡವಪುರ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ವಿಶ್ವ ಬ್ಯಾಂಕ್‌ನಿಂದ ಆರೋಗ್ಯ ಇಲಾಖೆಗೆ ಪ್ರತಿವರ್ಷ ಬರುವ ಹಣ ಎಷ್ಟು?

2) ಅಸಂಘಟಿತ ಕಾರ್ಮಿಕರಿಗೆ ಹೆಲ್ತ್ ಕಾರ್ಡ್ ಕೊಡುವ ಯೋಜನೆಯನ್ನು ಅನುಷ್ಠಾನಕ್ಕೆ ತರಲಾಗಿದೆಯೇ? ತಂದಿದ್ದಲ್ಲಿ ಅದನ್ನು ಯಾವಾಗ ತರಲಾಯಿತು? ಅಸಂಘಟಿತ ಕಾರ್ಮಿಕರಲ್ಲಿ ಈ ಯೋಜನೆಯ ಪ್ರಯೋಜನವನ್ನು ಪಡೆದುಕೊಂಡಿರುವವರ ಸಂಖ್ಯೆ ಎಷ್ಟು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ):

1) ಕರ್ನಾಟಕ ಆರೋಗ್ಯ ಪದ್ಧತಿಗಳ ಅಭಿವೃದ್ಧಿ ಯೋಜನೆಯು 545,80 ಕೋಟಿಯದಾಗಿದ್ದು ಇದನ್ನು 5 ವರ್ಷಗಳ ಅವಧಿಯಲ್ಲಿ ಪೂರ್ಣಗೊಳಿಸಲಾಗುತ್ತದೆ. ಈ ಯೋಜನೆಯಡಿ ಖರ್ಚು ಮಾಡಿದ ಮೊತ್ತವನ್ನು ಆಗಿಂದಾಗ್ಗೆ ರಿಇಂಬರ್ಸ್‌ಮೆಂಟ್ ಮೂಲಕ ವಿಶ್ವಬ್ಯಾಂಕ್‌ನಿಂದ ಪಡೆಯಬಹುದೇ ಹೊರತು ವರ್ಷಂಪ್ರತಿ ಹಣವನ್ನು ಮುಂಗಡವಾಗಿ ವಿಶ್ವಬ್ಯಾಂಕ್ ಒದಗಿಸುವುದಿಲ್ಲ.

2) ಅಸಂಘಟಿತ ಕಾರ್ಮಿಕರಿಗೆ ಪ್ರತ್ಯೇಕವಾಗಿ ಹೆಲ್ತ್ ಕಾರ್ಡ್ ಕೊಡುವಂತಹ ಕಾರ್ಯಕ್ರಮವು ಸದ್ಯಕ್ಕೆ ಈ ಯೋಜನೆಯ ಕಾರ್ಯವ್ಯಾಪ್ತಿಯಲ್ಲಿ ಇರುವುದಿಲ್ಲ. ಆದರೆ ರಾಜ್ಯದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ಎಲ್ಲರಿಗೆ ಉಚಿತ ಆರೋಗ್ಯ ಸೌಲಭ್ಯ ಒದಗಿಸಲು ಹಳದಿಕಾರ್ಡ್ ಯೋಜನೆಯನ್ನು ಅನುಷ್ಠಾನಕ್ಕೆ ತರಲಾಗುತ್ತಿದೆ. ಈ ಹಳದಿ ಕಾರ್ಡ್ ಯೋಜನೆಯನ್ನು ರಾಜ್ಯ ಸರ್ಕಾರವು ಪ್ರಾಯೋಗಿಕವಾಗಿ 5 ಜಿಲ್ಲೆಗಳಲ್ಲಿ 1994-95ರಲ್ಲಿ ಪ್ರಾರಂಭಿಸಿ ಈಗ ವಿಶ್ವ ಬ್ಯಾಂಕ್ ಯೋಜನೆಯಡಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಈ ಹಳದಿ ಕಾರ್ಡ್ ಯೋಜನೆಯನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ